# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಬಸವರಾಜ ಕೇಸರಿ, ತೋಟಗಾರಿಕೆ ಉಪ ನಿರ್ದೇಶಕರು ಇವರು ಪ್ರಸ್ತುತ ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ,ಬೆಂಗಳೂರು ಇವರ ನಿಯೋಜನಾ ಷರತ್ತು ಹಾಗೂ ನಿಬಂಧನೆಗಳ ಕುರಿತು.

ಓದಲಾಗಿದೆ : 1) ಸರ್ಕಾರದ ಅಧಿಸೂಚನೆ ಸಂಖ್ಯೆ:ತೋಇ 133 ತೋಸೇಪ 2013, ದಿನಾಂಕ:31.07.2013.

2) ಸರ್ಕಾರದ ಅಧಿಸೂಚನೆ ಸಂಖ್ಯೆ:ಕೃಇ 78 ಕೃಪವ 2013, ದಿನಾಂಕ:25.10.2013.

3) ಮುಖ್ಯ ಕಾರ್ಯನಿರ್ವಹಣಾಧಿಕಾರಿ,ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಇವರ ಪತ್ರ ಸಂಖ್ಯೆ: ಕೆಎಬಿಡಿಸಿ: 2013-14/60, ದಿನಾಂಕ: 23/31.12.2013.

**ಪ್ರಸ್ತಾವನೆ :**

ಮೇಲೆ ಕ್ರಮ ಸಂಖ್ಯೆ: 1 ರಲ್ಲಿ ಓದಲಾದ ಅಧಿಸೂಚನೆಯಲ್ಲಿ ಶ್ರೀ ಬಸವರಾಜ ಕೇಸರಿ, ತೋಟಗಾರಿಕೆ ಉಪ ನಿರ್ದೇಶಕರು ಇವರನ್ನು ತೋಟಗಾರಿಕೆ ಉಪ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಅಭಿವೃದ್ಧಿ ನಿಗಮ, ಬೆಂಗಳೂರು ಹುದ್ದೆಗೆ ನೇಮಿಸಲು ಇವರ ಸೇವೆಯನ್ನು ಕೃಷಿ ಇಲಾಖೆಗೆ ನೀಡಲಾಗಿದೆ. ಮೇಲೆ ಕ್ರಮ ಸಂಖ್ಯೆ: 2 ರಲ್ಲಿ ಶ್ರೀ ಬಸವರಾಜ ಕೇಸರಿ, ತೋಟಗಾರಿಕೆ ಉಪ ನಿರ್ದೇಶಕರು ಇವರಿಗೆ ತೋಟಗಾರಿಕೆ ಉಪ ನಿರ್ದೇಶಕರು, ಕರ್ನಾಟಕ ರಾಜ್ಯ ಕೃಷಿ ಅಭಿವೃದ್ಧಿ ನಿಗಮ, ಬೆಂಗಳೂರು ಇಲ್ಲಿಗೆ ಸ್ಥಳ ನಿಯುಕ್ತಿಗೊಳಿಸಲಾಗಿದೆ. ಮೇಲೆ ಕ್ರಮ ಸಂಖ್ಯೆ: 3 ರಲ್ಲಿ ಓದಲಾದ ಪತ್ರದಲ್ಲಿ ಶ್ರೀ ಬಸವರಾಜ ಕೇಸರಿ ಇವರ ನಿಯೋಜನೆ ಷರತ್ತು ಮತ್ತು ನಿಬಂಧನೆಗಳನ್ನು ಹೊರಡಿಸುವಂತೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ,ಬೆಂಗಳೂರು ಇವರು ಕೋರಿರುತ್ತಾರೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಕೃಇ 104 ಕೃಪಸೇ 2014,**
**ಬೆಂಗಳೂರು, ದಿನಾಂಕ: 29-05-2014.**

ಪ್ರಸ್ತಾವನೆಯಲ್ಲಿ ತಿಳಿಸಿರುವ ಅಂಶಗಳ ಹಿನ್ನಲೆಯಲ್ಲಿ ಶ್ರೀ ಬಸವರಾಜ ಕೇಸರಿ, ತೋಟಗಾರಿಕೆ ಉಪ ನಿರ್ದೇಶಕರು ಇವರು ನಿಯೋಜನೆ ಮೇಲೆ ತೋಟಗಾರಿಕೆ ಉಪ ನಿರ್ದೇಶಕರು, ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ,ಬೆಂಗಳೂರು ಇವರಿಗೆ ಈ ಕೆಳಕಂಡ ಷರತ್ತು ಮತ್ತು ನಿಬಂಧನೆಗಳನ್ನು ವಿಧಿಸಿ ಆದೇಶವನ್ನು ಹೊರಡಿಸಿದೆ.

1. ~~ಪ್ರತಿ ನಿಯೋಜನೆ ಅವಧಿ:~~ ಅನ್ಯ ಸೇವೆಯ ಮೇಲಿನ ಪ್ರತಿನಿಯೋಜನೆಯ ~~ಅವಧಿಯು ಮೂರು~~ ವರ್ಷಗಳಾಗಿರುತ್ತದೆ.
2. ಅನ್ಯ ಸೇವೆಯ ಮೇಲಿನ ಪ್ರತಿ ನಿಯೋಜನೆಯ ಪ್ರಾರಂಭ ಮತ್ತು ಮುಕ್ತಾಯದ ಅವಧಿ:- ಅನ್ಯ ಸೇವೆಯ ಮೇಲಿನ ಪ್ರತಿನಿಯೋಜನೆಯ ಅವಧಿಯು ದಿನಾಂಕ:25.10.2013 ರಿಂದ ತೋಟಗಾರಿಕೆ ಉಪ ನಿರ್ದೇಶಕರು, ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ, ಬೆಂಗಳೂರು ಹುದ್ದೆಯ ಕಾರ್ಯಭಾರವನ್ನು ವಹಿಸಿಕೊಂಡ ದಿನಾಂಕದಿಂದ ಪ್ರಾರಂಭವಾಗುವುದು ಮತ್ತು ಸರ್ಕಾರದ ಮುಂದಿನ ಆದೇಶದವರೆಗೆ ಅಥವಾ ಸದರಿ ಹುದ್ದೆಯ ಕಾರ್ಯಭಾರವನ್ನು ವಹಿಸಿಕೊಟ್ಟ ದಿನಾಂಕದಂದು ಮುಕ್ತಾಯಗೊಳ್ಳುವುದು
3. ವೇತನ: ಅನ್ಯ ಸೇವೆಯ ಮೇಲಿನ ಪ್ರತಿ ನಿಯೋಜನೆ ಅವಧಿಯಲ್ಲಿ ಅವನು ಮಾತೃ ಇಲಾಖೆಯಲ್ಲಿ ಹೊಂದಿರುವ ಹುದ್ದೆಗೆ ಅನ್ವಯವಾಗುವ ವೇತನ ಶ್ರೇಣಿಯಲ್ಲಿ ವೇತನವನ್ನು ಪಡೆಯುತ್ತಾನೆ.

4. **ತುಟ್ಟಿಭತ್ಯೆ: ಮನೆ ಬಾಡಿಗೆ ಭತ್ಯೆ: ನಗರ ಪರಿಹಾರ ಭತ್ಯೆ:** ತುಟ್ಟಿ ಭತ್ಯೆ, ಮನೆ ಬಾಡಿಗೆ ಭತ್ಯೆ ಮತ್ತು ನಗರ ಪರಿಹಾರ ಭತ್ಯೆಯ ಪಾವತಿಯು ರಾಜ್ಯ ಸರ್ಕಾರದ ನಿಯಮಗಳಡಿಯಲ್ಲಿ ಕ್ರಮಗೊಳಿಸಲಾಗುವುದು.

5. **ಸೇರುವ ಕಾಲ, ಸೇರುವ ಕಾಲದ ವೇತನ ಮತ್ತು ವರ್ಗಾವಣೆ ಪ್ರಯಾಣ ಭತ್ಯೆ:** ಇವುಗಳನ್ನು ಅನ್ಯ ಸೇವೆಯ ಮೇಲೆ ಹೋಗುವಾಗ ಮತ್ತು ಅಲ್ಲಿಂದ ಹಿಂದಿರುಗುವಾಗ ರಾಜ್ಯ ಸರ್ಕಾರದ ನಿಯಮಗಳ ಆದೇಶಗಳಡಿಯಲ್ಲಿ ಕ್ರಮಗೊಳಿಸಲಾಗುವುದು. ಇವುಗಳನ್ನು ಅನ್ಯ ನಿಯೋಜಕನು ಪಾವತಿಮಾಡತಕ್ಕದ್ದು.

6. **ಪ್ರಯಾಣ ಭತ್ಯೆ:** ಅನ್ಯ ಸೇವೆಗೆ ಸೇರಿದ ನಂತರ ಕೈಗೊಂಡ ಪ್ರಯಾಣಗಳಿಗೆ ಪ್ರಯಾಣ ಭತ್ಯೆ ಮತ್ತು ದಿನಭತ್ಯೆಯನ್ನು ಅನ್ಯ ನಿಯೋಜಕನಲ್ಲಿನ ಸಂಬಂಧಿತ ನಿಯಮಗಳ ಪ್ರಕಾರ ಪಡೆಯಲು ಸರ್ಕಾರಿ ನೌಕರನು ಅರ್ಹನಾಗಿರುತ್ತಾನೆ.

7. **ರಜೆ ನಿಯಮಗಳು:** ರಾಜ್ಯ ಸರ್ಕಾರದಲ್ಲಿ ಅವನಿಗೆ ಅನ್ವಯವಾಗುವ ರಜೆ ನಿಯಮಗಳಿಗೆ ಒಳಪಟ್ಟಿರುತ್ತಾನೆ.

8. **ರಜೆ ಪ್ರಯಾಣ ರಿಯಾಯಿತಿ:** ರಾಜ್ಯ ಸರ್ಕಾರದಲ್ಲಿನ ಸಂಬಂಧಿತ ನಿಯಮಗಳ ಪ್ರಕಾರ ಸ್ವಗ್ರಾಮ ಪ್ರಯಾಣಕ್ಕೆ ರಜೆ ಪ್ರಯಾಣ ರಿಯಾಯಿತಿಯನ್ನು ಪಡೆಯಲು ಸರ್ಕಾರಿ ನೌಕರನು ಅರ್ಹನಾಗಿರುತ್ತಾನೆ.

9. **ಗಳಿಗೆ ರಜೆ ನಗಧೀಕರಣ ಸೌಲಭ್ಯ:** ಕರ್ನಾಟಕ ಸರ್ಕಾರಿ ಸೇವಾ ನಿಯಮಾವಳಿಗಳ ಅನುಬಂಧ-ಸಿ ಯಲ್ಲಿರುವ ನಿಯಮಗಳ ಪ್ರಕಾರ ಗಳಿಕೆ ರಜೆ ನಗಧೀಕರಣ ಸೌಲಭ್ಯಕ್ಕೆ ಸರ್ಕಾರಿ ನೌಕರನು ಅರ್ಹನಾಗಿರುತ್ತಾನೆ.

10. **ವೈದ್ಯಕೀಯ ರಿಯಾಯಿತಿಗಳು:** 1983ರ ಕರ್ನಾಟಕ ಸರ್ಕಾರಿ ನೌಕರರ(ವೈದ್ಯಕೀಯ ಉಪಚಾರ) ನಿಯಮಗಳಲ್ಲಿ ಲಭ್ಯವಿರುವ ವೈದ್ಯಕೀಯ ಸೌಲಭ್ಯಗಳಿಗೆ ಕಡಿಮೆಯಿಲ್ಲದಂತೆ ಸೌಲಭ್ಯಗಳನ್ನು ಪಡೆಯಲು ಸರ್ಕಾರಿ ನೌಕರನು ಅರ್ಹನಾಗಿರುತ್ತಾನೆ ಮತ್ತು ಅವರ ಬಾಬ್ತಿನ ವೆಚ್ಚವನ್ನು ಅನ್ಯ ನಿಯೋಜಕನೇ ಭರಿಸತಕ್ಕದ್ದು.

11. **ದುರ್ಬಲತೆ ರಜೆ:** ಅನ್ಯ ನಿಯೋಜಕನ ಬಳಿ ಸೇವೆಯಲ್ಲಿರುವಾಗ ಮತ್ತು ಸೇವೆಯ ಮೂಲಕ ಸಂಬಂಧಿಸುವ ದುರ್ಬಲತೆಗೆ ಸಂಬಂಧಿಸಿದಂತೆ ಮಂಜೂರಾದ ದುರ್ಬಲತೆ ರಜೆಗೆ, ಇಂತಹ ದುರ್ಬಲತೆಯು ಅನ್ಯ ನಿಯೋಜಕನ ಬಳಿಯಲ್ಲಿನ ಸೇವೆಯು ಕೊನೆಗೊಂಡ ನಂತರ ಕಂಡು ಬಂದರೂ, ಸಂಬಂಧಿಸಿದ ರಜೆ ವೇತನವನ್ನು ಪಾವತಿ ಮಾಡಲು ಅನ್ಯ ನಿಯೋಜಕನು ಬದ್ಧನಾಗಿರುತ್ತಾನೆ.

12. **ರಜೆ ವೇತನ ಮತ್ತು ನಿವೃತ್ತಿ ವೇತನ ಅಂಶದಾನ :** (ಅ) ರಜೆ ವೇತನ ಮತ್ತು ನಿವೃತ್ತಿ ವೇತನ ಅಂಶದಾನವನ್ನು ಅನ್ಯನಿಯೋಜಕನು ಈ ಮುಂದಿನ ದರಗಳಲ್ಲಿ ಪಾವತಿ ಮಾಡತಕ್ಕದ್ದು.

<u>ರಜೆ ವೇತನ ಅಂಶದಾನ:</u> ಅನ್ಯ ಸೇವೆಯ ಅವಧಿಯಲ್ಲಿ ಅನ್ಯ ಸೇವಾ ಭತ್ಯೆಯೂ ಸೇರಿದಂತೆ ಪಡೆಯುವ ಸಂಬಳದ ಶೇಕಡ 11 ರಷ್ಟು.

<u>ನಿವೃತ್ತಿ ವೇತನ ಅಂಶದಾನ:</u> ಕಾಲಕಾಲಕ್ಕೆ ಪಡೆಯುವ ವೇತನದ ಎಂಟನೇ ಒಂದು ಭಾಗ ಈ ಉದ್ದೇಶಕ್ಕೆ ವೇತನ ಎಂದರೆ ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 37 ಎಸ್‌ಆರ್‌ಎಸ್ 87, ದಿನಾಂಕ:11.3.88ರಲ್ಲಿ ವಿವರಿಸಲಾದ ವೇತನ ಎಂದು ಅರ್ಥ.

ಆ) ಅನ್ಯ ನಿಯೋಜಕನು ವಾರ್ಷಿಕವಾಗಿ ಪ್ರತಿ ಆರ್ಥಿಕ ವರ್ಷ ಕೊನೆಗೊಂಡ 15 ದಿನಗಳೊಳಗೆ ಅಥವಾ ಆರ್ಥಿಕ ವರ್ಷ ಕೊನೆಗೊಳ್ಳುವ ಮುನ್ನವೇ ಅನ್ಯ ಸೇವೆಯು ಮುಗಿದು ಹೋದುದರಿಂದ ರಜೆ ವೇತನ ಮತ್ತು ನಿವೃತ್ತಿ ವೇತನ ಅಂಶದಾನವನ್ನು ಪಾವತಿ ಮಾಡತಕ್ಕದ್ದು.

ರಜೆ ವೇತನ ಮತ್ತು ನಿವೃತ್ತಿ ವೇತನ ಅಂಶದಾನಗಳನ್ನು ಪ್ರತ್ಯೇಕವಾಗಿ ಈ ಮುಂದಿನ ಲೆಕ್ಕಶೀರ್ಷಿಕೆಗಳಿಗೆ ಸಂದಾಯ ಮಾಡತಕ್ಕದ್ದು.

| | | |
|---|---|---|
| ಅ) ರಜೆ ವೇತನ | 1. ಅಖಿಲ ಭಾರತ ಸೇವೆಯ ಅಧಿಕಾರಿಗಳ ಪ್ರಕರಣದಲ್ಲಿ | 0070 ಇತರೆ ಆಡಳಿತ ಸೇವೆಗಳು 60–ಇತರೆ ಸೇವೆಗಳು–800 ಇತರೆ ಜಮೆಗಳು 13 ಅಖಿಲ ಭಾರತ ಸೇವೆಯ ಅಧಿಕಾರಿಗಳಿಗೆ ಸಂಬಂಧಿಸಿದ ರಜೆ ವೇತನ ಅಂಶದಾನ. |
| | 2. ಇತರರ ಪ್ರಕರಣದಲ್ಲಿ ಕೃತ್ಯ ಸಂಬಂಧದ ಜಮೆ | ಸಿಬ್ಬಂದಿಗೆ ಅನ್ವಯಿಸುವ ವೆಚ್ಚ ಶೀರ್ಷಿಕೆಗೆ ಅನುಗುಣವಾದ ಕೃತ್ಯ ಸಂಬಂಧದ ಜಮೆ ಶೀರ್ಷಿಕೆ 800–ಇತರೆ ಜಮೆಗಳು ರಜೆ ವೇತನ ಅಂಶದಾನ. |
| | 3. ಸರಿಹೊಂದುವ ಜಮೆ ಶೀರ್ಷಿಕೆ ಇಲ್ಲದೇ ಹೋದಲ್ಲಿ | -- |
| | 4. ಸಾಮಾನ್ಯ ಸೇವೆಗಳು ಇದರ ಅಡಿಯಲ್ಲಿ ಬರುವ ಇಲಾಖೆಗಳ ಪ್ರಕರಣದಲ್ಲಿ | 0075 ಇತರೆ ಸಾಮಾನ್ಯ ಸೇವೆಗಳು, 800 ಇತರೆ ಜಮೆಗಳು– ರಜೆ ವೇತನ ಅಂಶದಾನ |
| | 5.ಸಾಮಾಜಿಕ ಮತ್ತು ಸಾಮುದಾಯಿಕ ಸೇವೆಗಳು. ಇದರ ಅಡಿಯಲ್ಲಿ ಬರುವ ಇಲಾಖೆಗಳ ಪ್ರಕರಣದಲ್ಲಿ | 0250 ಇತರೆ ಸಾಮಾಜಿಕ ಸೇವೆಗಳು–800 ಇತರೆ ಜಮೆಗಳು– ರಜೆ ವೇತನ ಅಂಶಗಳು |
| | 6. ಆರ್ಥಿಕ ಸೇವೆಗಳು, ಇದರ ಅಡಿಯಲ್ಲಿ ಬರುವ ಇಲಾಖೆಗಳ ಪ್ರಕರಣದಲ್ಲಿ | 1475–ಇತರೆ ಸಾಮಾನ್ಯ ಆರ್ಥಿಕ ಸೇವೆಗಳು–800 ಇತರೆ ಜಮೆಗಳು–ರಜೆ ವೇತನ ಅಂಶದಾನ |
| ಆ) ನಿವೃತ್ತಿ ವೇತನ ಅಂಶದಾನ | 0071 ನಿವೃತ್ತಿ ವೇತನ ಮತ್ತು ಇತರೆ ನಿವೃತ್ತಿ ಸೌಲಭ್ಯಗಳ ಬಗ್ಗೆ ಅಂಶದಾನ ಮತ್ತು ವಸೂಲಿಗಳು 101 ಚಂದಾಗಳು ಮತ್ತು ಅಂಶದಾನ–03 ನಿವೃತ್ತಿ ವೇತನ ವೆಚ್ಚದ ಬಗ್ಗೆ ವಾಣಿಜ್ಯ ಇಲಾಖೆಗಳಿಂದ ವಸೂಲು ಮಾಡಲಾದ ಅಂಶದಾನ ಅಥವಾ 06 ನಿವೃತ್ತಿ ವೇತನದ ವೆಚ್ಚದ ಸಲುವಾಗಿ ಸ್ಥಳೀಯ ಸಂಸ್ಥೆಗಳಿಂದ ವಸೂಲು ಮಾಡಿದ ಅಂಶದಾನ. | |
| ಇ) ಮೇಲಿನ ಅವಧಿಯೊಳಗೆ ರಜೆ ವೇತನ ಮತ್ತು ನಿವೃತ್ತಿ ವೇತನ ಅಂಶದಾನಗಳನ್ನು ಪಾವತಿ ಮಾಡದಿದ್ದರೆ, ಸರ್ಕಾರವು ವಿಶೇಷವಾಗಿ ವಿನಾಯಿತಿ ತೋರಿಸಿದ ಹೊರತು, ಪಾವತಿ ಮಾಡಿ ಅಂಶದಾನ ಮೇಲೆ ಮೇಲಿನ ಅವಧಿಯು ಮುಕ್ತಾಯಗೊಂಡ ದಿನಾಂಕದಿಂದ ಅಂಶದಾನವು ಅಂತಿಮವಾಗಿ ಪಾವತಿ ಮಾಡುವ ದಿನಾಂಕದವರೆಗೆ ಪ್ರತಿ ರೂ.100/–ಗಳಿಗೆ ದಿನಪ್ರತಿ 2 ಪೈಸೆ ದರದಲ್ಲಿ ಬಡ್ಡಿಯನ್ನು ಅನ್ಯ ನಿಯೋಜಕರು ಸರ್ಕಾರಕ್ಕೆ ಪಾವತಿ ಮಾಡತಕ್ಕದ್ದು. | | |

**13.** ರಾಜ್ಯ ಸರ್ಕಾರಿ ನೌಕರರ ಸಾಮೂಹಿಕ ವಿಮಾ ಯೋಜನೆ: ರಾಜ್ಯ ಸರ್ಕಾರಿ ನೌಕರರ ಸಾಮೂಹಿಕ ವಿಮಾ ಯೋಜನೆಗೆ ಸಂಬಂಧಿಸಿದ ಮಾಸಿಕ ವಂತಿಗೆಯನ್ನು ಪ್ರತಿನಿಯೋಜಿತ ನೌಕರನ ವೇತನದಿಂದ ವಸೂಲು ಮಾಡುವುದು ಮತ್ತು ಅದನ್ನು 1981ರ ಕರ್ನಾಟಕ ರಾಜ್ಯ ಸರ್ಕಾರಿ ಸಾಮೂಹಿಕ ವಿಮಾ ಯೋಜನೆಯ ಅನುಬಂಧ–ಎ ರಲ್ಲಿನ ಅನುಸೂಚಿಯೊಂದಿಗೆ ಸಂದಾಯವಾಗಬೇಕಾದ ಮಾತ್ರ ಇಲಾಖೆಯ ಕಚೇರಿ ಮುಖ್ಯಸ್ಥನಿಗೆ ಕ್ರಾಸ್ ಮಾಡಿದ ಚೆಕ್:ಡಿಮ್ಯಾಂಡ್ ಡ್ರಾಫ್ಟ್ ಮೂಲಕ ಸಂಬಂಧಿತ ಲೆಕ್ಕ ಶೀರ್ಷಿಕೆಗೆ ಜಮೆ ಮಾಡಲು ಕಳುಹಿಸಿ ಕೊಡುವುದು ಅನ್ಯ ನಿಯೋಜಕನ ಹೊಣೆಗಾರಿಕೆಯಾಗತಕ್ಕದ್ದು.

**14.** ಕರ್ನಾಟಕ ಸರ್ಕಾರಿ ವಿಮಾ ಇಲಾಖೆಯ ವಿಮಾ ಪತ್ರ: ಸಾಮಾನ್ಯ ಭವಿಷ್ಯ ನಿಧಿಗೆ ಚಂದಾ: ಅನ್ಯ ಸೇವೆಯ ಮೇಲೆ ಪ್ರತಿನಿಯೋಜನೆ ಹೋಗುವ ಸಮಯದಲ್ಲಿ ಕೆ.ಜಿ.ಐ.ಡಿ ನಿಯಮಗಳು ಜಿ.ಪಿ.ಎಫ್ ನಿಯಮಗಳ ಪ್ರಕಾರ ಚಂದಾ ನೀಡುತ್ತಿದ್ದ ಕೆ.ಜಿ.ಐ.ಡಿ:ಜಿ.ಪಿ.ಎಫ್ ವಿಮಾ ಪತ್ರಗಳಿಗೆ ಚಂದಾ ನೀಡುವುದನ್ನು ಸರ್ಕಾರಿ ನೌಕರನು ಮುಂದುವರೆಸುತ್ತಾನೆ. ಸರ್ಕಾರಿ ನೌಕರರ ಸಂಬಳದಿಂದ ಚಂದಾಗಳನ್ನು ವಸೂಲು ಮಾಡತಕ್ಕದ್ದು ಮತ್ತು ಈ ಮುಂದಿನ ಲೆಕ್ಕಶೀರ್ಷಿಕೆಗಳಿಗೆ ಜಮಾ ಮಾಡತಕ್ಕದ್ದು.

ಸಾಮಾನ್ಯ ಭವಿಷ್ಯ ನಿಧಿ- 8005 ರಾಜ್ಯ ಭವಿಷ್ಯ ನಿಧಿ
ಕರ್ನಾಟಕ ಸರ್ಕಾರಿ ವಿಮಾ ಇಲಾಖೆ-801 ವಿಮೆ ಮತ್ತು
ನಿವೃತ್ತಿ ವೇತನ ನಿಧಿಗಳು- 1 ವಿಮೆ ನಿಧಿಗಳು

15. ಸರ್ಕಾರಿ ಕಂಪನಿ, ಮಂಡಳಿ, ನಿಗಮ ಇತ್ಯಾದಿಗಳಿಗೆ ಪ್ರತಿನಿಯೋಜಿತವಾಗಿ ಮಾಸಿಕ ರೂ.2500/-ಗಳಿಗೆ ಮೀರಿದ ಸಂಬಳವನ್ನು ಪಡೆಯುತ್ತಿರುವ ಸರ್ಕಾರಿ ನೌಕರನಿಗೆ, ಉದ್ದಿಮೆಯು 1965ರ ಬೋನಸ್ ಸಂಧಾಯ ಅಧಿನಿಯಮದ ಪ್ರಕಾರ ಬೋನಸ್ ಘೋಷಿಸಿದ್ದಲ್ಲಿ ಅಥವಾ 1965ರ ಬೋನಸ್ ಸಂದಾಯ ಅಧಿನಿಯಮದ ತತ್ವಗಳ ಪ್ರಕಾರ ಅನುಗ್ರಹ ಕೊಡುಗೆ ನೀಡಿದಲ್ಲಿ, ಬೋನಸ್ ಅಥವಾ ಅನುಗ್ರಹ ಕೊಡುಗೆಯನ್ನು ಪಡೆಯಲು ಅನುಮತಿಸತಕ್ಕದ್ದು.

16. ಪ್ರತಿ ನಿಯೋಜಕ ಅಧಿಕಾರಿ/ನೌಕರನಿಗೆ ಮುಂಬಡ್ತಿ: ವರ್ಗಾವಣೆ ಮಾಡುವುದು ಅಥವಾ ಹೆಚ್ಚುವರಿ ಕಾರ್ಯಭಾರವನ್ನು ವಹಿಸುವುದು ಅಥವಾ ಹೆಚ್ಚುವರಿ ಸಂಭಾವನೆಯನ್ನು ನೀಡುವುದು ಅಥವಾ ಸೌಲಭ್ಯಗಳನ್ನು ಒದಗಿಸುವುದು. ಇವುಗಳನ್ನು ಸರ್ಕಾರದ ಪೂರ್ವಾನುಮತಿ ಪಡೆಯದೆ ಮಾಡತಕ್ಕದ್ದಲ್ಲ.

17. ಅನ್ಯಸೇವಾ ನಿಯೋಜಕರ ಗಮನವನ್ನು ಕರ್ನಾಟಕ ನಾಗರೀಕ ಸೇವಾ(ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಗಳು 1957ರ ನಿಯಮ 15ಕ್ಕೆ ಸೆಳೆಯಲಾಗಿದೆ. ಈ ನಿಯಮವು ಪ್ರತಿ ನಿಯೋಜಕರ ವಿರುದ್ಧ ಶಿಸ್ತು ನಡವಳಿಯನ್ನು ಜರುಗಿಸಲು ಅನ್ಯಸೇವಾ ನಿಯೋಜಕರಿಗೆ ಅಧಿಕಾರ ನೀಡುತ್ತದೆ. ಸರ್ಕಾರಿ ಆದೇಶ ಸಂಖ್ಯೆ:ಎಫ್‌ಡಿ 1 ಟಿಎಫ್‌ಪಿ 96, ದಿನಾಂಕ:10.7.1996ರನ್ವಯ ಈ ಆದೇಶವನ್ನು ಆರ್ಥಿಕ ಇಲಾಖೆಯ ಸಹಮತಿಯನ್ನು ಪೂರ್ವಭಾವಿಸಿ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಮಂಜುನಾಥ ಪಾಟೀಲ್)
ಸರ್ಕಾರದ ಅಧೀನ ಕಾರ್ಯದರ್ಶಿ
ಕೃಷಿ ಇಲಾಖೆ.

ಇವರಿಗೆ:

1. ಮಹಾಲೇಖಪಾಲರ ಕಛೇರಿ, (ಲೆಕ್ಕ ಪತ್ರ ಮತ್ತು ಲೆಕ್ಕ ತಪಾಸಣೆ) ಹೊಸಕಟ್ಟಡ, ಬೆಂಗಳೂರು-1.
2. ಆಯುಕ್ತರು ಕೃಷಿ ಇಲಾಖೆ, ಶೇಷಾದ್ರಿ ರಸ್ತೆ, ಬೆಂಗಳೂರು.
3. ಮುಖ್ಯ ಕಾರ್ಯನಿರ್ವಹಣಾಧಿಕಾರಿ, ಕರ್ನಾಟಕ ಕೃಷಿ ವಾಣಿಜ್ಯ ಅಭಿವೃದ್ಧಿ ನಿಗಮ, 2ನೇ ಮಹಡಿ, ಅಲ್ಯೂಮಿನಿ ಅಸೋಷಿಯೇಷನ್ ಕಟ್ಟಡ, ಪಶುವೈದ್ಯಕೀಯ ಕಾಲೇಜು ಕ್ಯಾಂಪಸ್, ಹೆಬ್ಬಾಳ, ಬೆಂಗಳೂರು-24.
4. ಸಂಬಂಧಿಸಿದ ಅಧಿಕಾರಿಗಳಿಗೆ (ಕೃಷಿ ಆಯುಕ್ತರ ಮೂಲಕ).
5. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಕೃಷಿ ಇಲಾಖೆ, ಇವರ ಆಪ್ತ ಕಾರ್ಯದರ್ಶಿ.
6. ಸರ್ಕಾರದ ಉಪ ಕಾರ್ಯದರ್ಶಿ ರವರ ಆಪ್ತ ಸಹಾಯಕರು, ಕೃಷಿ ಇಲಾಖೆ.
7. ಸಮನ್ವಯ ಶಾಖೆ/ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.